ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 20 :2021-22 ದಿನಾಂಕ: 07.08.2021

## ವಾರ್ಡ್ ಸಮಿತಿ ಸಭೆ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿ.ಆರ್/35/2020-21, ದಿನಾಂಕ: 16.04.2021ರ ಆದೇಶದಂತೆ ದಿನಾಂಕ: 07.08.2021 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ. 14 ರ ಸಭೆಯ ನಡವಳಿಗಳು:-**

ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರ.ಸಂ | ಹೆಸರು ಶ್ರೀಮತಿ / ಶ್ರೀ | ಪದನಾಮ |
|---|---|---|
| 1 | ಶ್ರೀ. ಕೆ. ಮರುಳಸಿದ್ಧಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್-14 |
| 3 | ಶ್ರೀ. ಡಾ॥ ವರುಣ್ ಕುಮಾರ್ | ಕೋವಿಡ್ ಮೆಡಿಕಲ್ ಆಫೀಸರ್, ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ |
| 4 | ಶ್ರೀ. ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 5 | ಶ್ರೀಮತಿ. ಚೈತ್ರ.ಎಂ | ಕಿರಿಯ ಆರೋಗ್ಯ ನಿರೀಕ್ಷಕರು |
| 6 | ಶ್ರೀ. ರಮೇಶ್ .ಆರ್ | ವಾಟರ್ ಇನ್ಸ್ಪೆಕ್ಟರ್, ಬಿಡಬ್ಲ್ಯೂ.ಎಸ್.ಎಸ್.ಬಿ |
| 7 | ಶ್ರೀ. ಮಂಜುನಾಥ್ | ವಾಟರ್ ಇನ್ಸ್ಪೆಕ್ಟರ್, ಬಿಡಬ್ಲ್ಯೂ.ಎಸ್.ಎಸ್.ಬಿ |
| 8 | ಶ್ರೀ. ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಹಿತರಕ್ಷಣಾ ಸಮಿತಿ |
| 9 | ಶ್ರೀ. ಸದಾಶಿವ | ನಾಗರೀಕ ಹಿತರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 10 | ಶ್ರೀ. ರಾಮಪ್ರಸಾದ್, | ಸಿದ್ದೇಶ್ವರ ಬಡಾವಣೆ, ನಾಗರೀಕ ಹಿತರಕ್ಷಣಾ ಸಮಿತಿ. |
| 11 | ಶ್ರೀ. ಬಿ.ಟಿ.ಲಕ್ಷ್ಮಿ ವೆಂಕಟೇಶ್ | ನಾಗರೀಕ ಹಿತ ರಕ್ಷಣ ಸಮಿತಿ, ಮುನಿಕೊಂಡಪ್ಪ ಬಡವಾಣೆ |
| 12 | ಶ್ರೀ. ಮೂಡಲ ಗಿರಿಯಪ್ಪ | ನಾಗರೀಕ ಹಿತ ರಕ್ಷಣ ಸಮಿತಿ, ಸಿಡೇದಹಳ್ಳಿ ಬಡವಾಣೆ |
| 13 | ಶ್ರೀ. ಎಂ.ಗಿರೀಶ್ | ನಾಗರೀಕ ಹಿತ ರಕ್ಷಣ ಸಮಿತಿ, ಸಿದ್ದೇಶ್ವರ ಬಡವಾಣೆ |
| 14 | ಶ್ರೀ. ಮಹದೇವಯ್ಯ | ತೋಟಗಾರಿಕೆ ಇಲಾಖೆ, ಬಿ.ಬಿ.ಎಂ.ಪಿ |
| 15 | ಶ್ರೀ. ಅಂಜನ ಮೂರ್ತಿ | ಮಾರ್ಷಲ್ ಬಿ.ಬಿ.ಎಂ.ಪಿ |

ನೋಡಲ್ ಅಧಿಕಾರಿಗಳು, ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪಧಾದಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಭೆಯಲ್ಲಿ ಹಾಜರಿದ್ದ ಸಂಭಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.



Scanned by CamScanner

- <u>ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳ ಬಗ್ಗೆ.</u>

ವಾರ್ಡ್ ಸಮಿತಿ ಸದಸ್ಯರುಗಳು ವಾರ್ಡ್ ವ್ಯಾಪ್ತಿಯಲ್ಲಿ ಮಂಜೂರಾಗಿರುವ, ಪ್ರಗತಿಯಲ್ಲಿರುವ ಕಾಮಗಾರಿಗಳ ಬಗ್ಗೆ ವಿವರಗಳನ್ನು ಒದಗಿಸುವಂತೆ ಕೋರಿದರು, ವಾರ್ಡ್ ಅಭಿಯಂತರರು ಮಾತನಾಡಿ ರೂ.15.00 ಕೋಟಿ ಅನುದಾನದಲ್ಲಿ ಸಿಡೇದಹಳ್ಳಿ ಸಿದ್ದೇಶ್ವರ ಮತ್ತು ಕಿರ್ಲೋಸ್ಕರ್ ಬಡಾವಣೆ ಭಾಗದಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದಾಗಿ ತಿಳಿಸಿದರು, ಈ ಬಗ್ಗೆ ಸಭೆಯಲ್ಲಿ ವಿವರವಾಗಿ ಚರ್ಚಿಸಿ ಮಂಜೂರಾಗಿರುವ ಕಾಮಗಾರಿಗಳನ್ನು ಆದ್ಯತೆಯ ಮೇಲೆ ಪ್ರಾರಂಭಿಸಲು ಮತ್ತು ಅಪೂರ್ಣ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ ನಂ. 14
ಸಹಾಯಕ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ಉ.ವಿ

- <u>ವಾರ್ಡ್ ವ್ಯಾಪ್ತಿಯಲ್ಲಿನ ಕೋವಿಡ್ ಪ್ರಕರಣಗಳ ಬಗ್ಗೆ:-</u>

**ವಾರ್ಡ್ ವ್ಯಾಪ್ತಿಯಲ್ಲಿ ಈವರೆಗಿನ ಕೋವಿಡ್ ಪ್ರಕರಣಗಳ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು, ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.**

1. ಒಟ್ಟು ಪಾಸಿಟಿವ್ ಪ್ರಕರಣಗಳು – 7253
2. ಡಿಸ್ಚಾರ್ಜ್ ಆದ ಪ್ರಕರಣಗಳು – 7100
3. ಸಾವು – 137
4. ಚಾಲ್ತಿಯಲ್ಲಿರುವ ಪ್ರಕರಣಗಳು – 16

ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿದಂತೆ, ಮಾರ್ಗಸೂಚಿಯಂತೆ ಅಗತ್ಯ ಕ್ರಮ ವಹಿಸುವಂತೆ ಮತ್ತು ನಾಗರೀಕರಲ್ಲಿ ಜಾಗೃತಿ ಮೂಡಿಸಲು ಕ್ರಮ ವಹಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಕ್ರಮ: ಆರೋಗ್ಯ ಪರಿವೀಕ್ಷಕರು / ಆರೋಗ್ಯ ಅಧಿಕಾರಿಗಳು,
ಬಾಗಲಗುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರ

- <u>ರಸ್ತೆ ಬದಿ ಚರಂಡಿಗಳಲ್ಲಿ ಹೂಳು ತೆಗೆಯುವ ಬಗ್ಗೆ.</u>

ವಾರ್ಡ್ ವ್ಯಾಪ್ತಿಯಲ್ಲಿನ ಚರಂಡಿಗಳಲ್ಲಿ ಹೂಳು ತುಂಬಿರುವ ಬಗ್ಗೆ ಹಾಗೂ ತೆರವುಗೊಳಿಸುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಗಮನ ಸೆಳೆದರು. ಈ ಬಗ್ಗೆ ವಾರ್ಡ್ ಅಭಿಯಂತರರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಿಲ್ಟ್ ಅಂಡ್ ಟ್ರ್ಯಾಕ್ಟರ್‌ನ ಎರಡು ತಂಡಗಳು ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿದರು. ನಗರದಲ್ಲಿ ವ್ಯಾಪಕವಾಗಿ ಮಳೆಯಾಗುತ್ತಿದ್ದು, ತಗ್ಗು ಪ್ರದೇಶಗಳಲ್ಲಿ ಹಾನಿಯುಂಟಾಗುವುದನ್ನು ತಡೆಯಲು ಆಧ್ಯತೆಯ ಮೇಲೆ ಚರಂಡಿಗಳಲ್ಲಿನ ಹೂಳು ತೆಗೆಯಲು ಕ್ರಮವಹಿಸುವಂತೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ ನಂ. 14
ಸಹಾಯಕ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ಉ.ವಿ

- <u>ಕಸ ವಿಲೇವಾರಿ ಬಗ್ಗೆ.</u>

ವಾರ್ಡ್ ವ್ಯಾಪ್ತಿಯ ಕೆಲವು ಬಡಾವಣೆಗಳಲ್ಲಿ ಸರಿಯಾಗಿ ಕಸವಿಲೇವಾರಿ ಆಗದ ಬಗ್ಗೆ ಸದಸ್ಯರುಗಳು ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದರು. ಕಸ ವಲೇವಾರಿ ಬಗ್ಗೆ ಹೊಸದಾಗಿ ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಿಸಲಾಗಿರುವುದನ್ನು ಸಭೆಯ ಗಮನಕ್ಕೆ ತಂದರು. ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮ ವಹಿಸಿ ವಾರ್ಡ್ ವ್ಯಾಪ್ತಿಯಲ್ಲಿ ಕಸವಿಲೇವಾರಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವಂತೆ ಸೂಚಿಸಲಾಯಿತು.

ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14
ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ)



Scanned by CamScanner

- **ಬೃಹತ್ ಮಳೆ ನೀರು ಗಾಲುವೆ ಬಗ್ಗೆ**

ವಾರ್ಡ್ ಸದಸ್ಯರುಗಳು ಮಾತನಾಡಿ ಬಾಗಲುಗುಂಟೆ, ಡಿಫೆನ್ಸ್ ಕಾಲೋನಿ ಭಾಗದಲ್ಲಿ 5 ಕಲ್‌ವರ್ಟ್‌ಗಳನ್ನು ನಿರ್ಮಿಸಲು ಮಂಜೂರಾಗಿದ್ದು, ಈವರೆವಿಗೆ 2 ಕಲ್‌ವರ್ಟ್‌ಗಳನ್ನು ಮಾತ್ರ ನಿರ್ಮಿಸಿದ್ದು, ಉಳಿದ 3 ಕಲ್‌ವರ್ಟ್‌ಗಳನ್ನು ನಿರ್ಮಿಸುವಂತೆ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಗಳು ಪರಿಶೀಲಿಸಿ ಬಾಕಿ ಇರುವ ಕಲ್‌ವರ್ಟ್ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸೂಚಿಸಿರುತ್ತಾರೆ.

ಕ್ರಮ: ಸಹಾಯಕ ಅಭಿಯಂತರರು
ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬೃ.ಮ.ನಿ)

**ರಸ್ತೆ ಅಗೆತದ ಬಗ್ಗೆ**

ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ರಸ್ತೆ ಅಗೆದು ವಾಹನ ಸಂಚಾರಕ್ಕೆ ಅಡಚಣೆ ಆಗುತ್ತಿರುವ ಬಗ್ಗೆ ವಾರ್ಡ್ ಸದಸ್ಯರುಗಳು ಸಭೆಯ ಗಮನಕ್ಕೆ ತಂದರು, ನೋಡಲ್ ಅಧಿಕಾರಿಗಳು ಮಾತನಾಡಿ ಅನಧಿಕೃತವಾಗಿ ರಸ್ತೆ ಅಗೆಯುವವರ ವಿರುದ್ಧ ನಿಯಾಮಾನುಸಾರ ಕ್ರಮವಹಿಸುವಂತೆ ಹಾಗೂ ಅನುಮತಿ ಪಡೆದು ರಸ್ತೆ ಅಗೆದಿದ್ದಲ್ಲಿ ಸರಿಯಾಗಿ(As per Technical specification) ಪುನರ್ನಿಮಿಸಿರುವ (Restoration) ಬಗ್ಗೆ ಪರಿಶೀಲಿಸುವಂತೆ ತಿಳಿಸಿದರು

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ ನಂ. 14
ಸಹಾಯಕ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ಉ.ವಿ

- **ವಾರ್ಡ್ ವ್ಯಾಪ್ತಿಯಲ್ಲಿ ಲಸಿಕಾ ಕಾರ್ಯಕ್ರಮದ ಬಗ್ಗೆ.**

ವಾರ್ಡ್‌ವ್ಯಾಪ್ತಿಯಲ್ಲಿ ಲಸಿಕಾ ಕಾರ್ಯಕ್ರಮ ಸರಿಯಾಗಿ ಆಗದೇ ಇರುವ ಬಗ್ಗೆ ಹಾಗೂ ಲಸಿಕಾ ಕಾರ್ಯಕ್ರಮದ ಬಗ್ಗೆ ಮುಂಚಿತವಾಗಿ ಮಾಹಿತಿ ಒದಗಿಸದ ಬಗ್ಗೆ ಸದಸ್ಯರು ಸಭೆಯ ಗಮನ ಸೆಳೆದರು. ತಮ್ಮ ವ್ಯಾಪ್ತಿಗೆ ಹಂಚಿಕೆಯಾಗುವ ಲಸಿಕೆಯನ್ನು ನೀಡುತ್ತಿರುವ ಬಗ್ಗೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಸುಮಾರು 30,000 ಜನರಿಗೆ ಲಸಿಕೆ ನೀಡಿರುವುದಾಗಿ ಕೋವಿಡ್ ಮೆಡಿಕಲ್ ಆಫೀಸರ್‌ರವರು ತಿಳಿಸಿದರು. ಈ ಬಗ್ಗೆ ವಿಸ್ತೃತವಾಗಿ ಚರ್ಚಿಸಿ ವಾರ್ಡ್ ವ್ಯಾಪ್ತಿಯಲ್ಲಿನ ದೈನಂದಿನ ಲಸಿಕಾ ಕಾರ್ಯಕ್ರಮದ ಮಾಹಿತಿಯನ್ನು ವಾಟ್ಸ್‌ಆಪ್ ಗ್ರೂಪ್‌ನಲ್ಲಿ ತಿಳಿಸುವಂತೆ ಹಾಗೂ ವ್ಯಪಕವಾಗಿ ಲಸಿಕೆ ಕಾರ್ಯಕ್ರಮ ಹಮ್ಮಿಕೊಂಡು ನಿಗದಿತ ಗುರಿ ಸಾಧಿಸುವ ಕುರಿತು ಚರ್ಚಿಲಾಯಿತ್ತು.

ಕ್ರಮ: ಕೋವಿಡ್ ಮೆಡಿಕಲ್ ಆಫೀಸರ್/ಆರೋಗ್ಯ
ವೈದ್ಯಾಧಿಕಾರಿಗಳು ಬಾಗಲಗುಂಟೆ

09/08/2021

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 14, ಬಾಗಲಗುಂಟೆ

ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ
ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ
ಮತ್ತು ಕಾರ್ಯಪಾಲಕ ಅಭಿಯಂತರರು



Scanned by CamScanner